## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಬಸ್ಸಾಪೂರ ಇ.ಜೆ ಗ್ರಾಮದ ತುರ್ತು ಕುಡಿಯುವ ನೀರಿನ ಯೋಜನೆಗೆ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ರಾಯಚೂರು ರವರ ಪತ್ರ ಸಂಖ್ಯೆ:ಜಿಪಂರಾ/ಕುನೀಸಯೋ/2011-12, ದಿ:14.07.2011.

—

**ಪೀಠಿಕೆ:**

ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಬಸ್ಸಾಪೂರ ಇ.ಜೆ ಗ್ರಾಮದ ಪೈಪಲೈನ ಕಾಮಗಾರಿಗೆ ರೂ.15.00ಲಕ್ಷ ಅನುದಾನ ಬಿಡುಗಡೆ ಮಾಡಬೇಕೆಂಬ ವಿನಂತಿ ಮೇರೆಗೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತಿ ರಾಯಚೂರು ಹಾಗು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರುರವರ ವರದಿ ಪಡೆಯಲಾಗಿದೆ ಬಸ್ಸಾಪೂರ ಇ.ಜೆ ಗ್ರಾಮವು 50-75% Coverage ವರ್ಗದಡಿಯಿದ್ದು, ನೀರಿನ ಗುಣಮಟ್ಟದ ಸಮಸ್ಯೆಯಿಲ್ಲದಿರುವುದರಿಂದ, ಪೈಪಲೈನ ಕಾಮಗಾರಿಗಾಗಿ ರೂ.9.00ಲಕ್ಷ ಪ್ರಸಕ್ತ ಸಾಲಿಗೆ ಒದಗಿಸಿಕೊಂಡಿರುವುದಾಗಿ ತಿಳಿಸಿದ್ದಾರೆ. 2011-12 ಸಾಲಿನ ಕ್ರಿಯಾ ಯೋಜನೆಯಡಿ ಒದಗಿಸಿಕೊಂಡಿರುವ ರೂ.9.00ಲಕ್ಷ ಉಪಯೋಗಿಸಿಕೊಂಡು ರೂ.15.00ಲಕ್ಷ ಅಂದಾಜಿನ ವೆಚ್ಚದಲ್ಲಿ ಕಾಮಗಾರಿ ಅನುಷ್ಠಾನಗೊಳಿಸಲು ತಿಳಿಸಿ, ಉಳಿದ ರೂ.6.00ಲಕ್ಷಗಳನ್ನು ಹೆಚ್ಚುವರಿ ಅನುದಾನವಾಗಿ ರಾಜ್ಯವಲಯದಡಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 80 ಗ್ರಾನೀಸ(4)2010 ಬೆಂಗಳೂರು, ದಿನಾಂಕ:19.07.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನಲೆಯಲ್ಲಿ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಬಸ್ಸಾಪೂರ ಇ.ಜೆ ಗ್ರಾಮದ ಕುಡಿಯುವ ನೀರಿನ ಅಭಿವೃದ್ಧಿಗಾಗಿ ಸೂಕ್ತ ಜಲ ಮೂಲ ಒದಗಿಸಿ ರೈಸಿಂಗ್ ಮೇನ್ ಹಾಗೂ ವಿತರಣಾ ವ್ಯವಸ್ಥೆಯ ಪೈಪಲೈನ ಕಾಮಗಾರಿಗಳನ್ನು ಒಟ್ಟು ರೂ.15.00ಲಕ್ಷ ಅಂದಾಜಿನ ವ್ಯಾಪ್ತಿಯೊಳಗೆ ಅನುಷ್ಠಾನಗೊಳಿಸಲು ಅನುಮತಿ ನೀಡಿದೆ. 2011-12ರ ಸಾಲಿನ ಕ್ರಿಯಾಯೋಜನೆಯಡಿಯಲ್ಲಿ ಈಗಾಗಲೇ ರೂ.9.00ಲಕ್ಷ ಈ ಸಲುವಾಗಿ ಒದಗಿಸಿಕೊಂಡಿರುವುದರಿಂದ, ಉಳಿದ ರೂ.6.00ಲಕ್ಷ(ಆರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು 2011-12ರ ಸಾಲಿಗೆ ರಾಜ್ಯವಲಯದ C & Q ಘಟಕದಡಿ ರಾಯಚೂರು ಜಿಲ್ಲಾ ಪಂಚಾಯತ್‌ಗೆ ಈ ಯೋಜನೆಗಾಗಿ ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸುವ ಕಾಮಗಾರಿಗಳ ವಿವರಗಳನ್ನು ಸದರಿ ಗ್ರಾಮ ಪಂಚಾಯತಿಯ ಮಾಹಿತಿಗಾಗಿ ಕಳುಹಿಸುವುದು, ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

3. ಈ ಅನುದಾನವನ್ನು ರಾಜ್ಯವಲಯದ ಲೆಕ್ಕಶೀರ್ಷಿಕೆ:4215-01-102-9-01-059ಯಡಿ ಗಣನೆಗೆ ತೆಗೆದುಕೊಂಡು, RTGS ಮುಖೇನ ಈಗಾಗಲೇ Coverage & Qualityಯಡಿ ಗೊತ್ತುಪಡಿಸಿರುವ SWSM ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್, ಮೂಲ ಖಾತೆ ಸಂಖ್ಯೆ:04462010091577ರಿಂದ Coverage & Quality ಕಾರ್ಯಕ್ರಮದ ಖಾತೆ ಸಂಖ್ಯೆ:04462010094572ಕ್ಕೆ

ರೂ.6.00ಲಕ್ಷಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ C&Q ಘಟಕದಡಿ ರಾಯಚೂರು ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು CE/PRED ಹಾಗೂ ರಾಯಚೂರು ಜಿಲ್ಲಾ ಪಂಚಾಯತ್ IMISನಡಿ ದಾಖಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011, ದಿ:08.03.2011 ಹಾಗೂ ಗ್ರಾಅಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/03/ಆಂ.ಆ.ಸ/2011, ದಿ:01.04.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಜಿಲ್ಲಾಧಿಕಾರಿಗಳು, ರಾಯಚೂರು.
13. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ರಾಯಚೂರು.
14. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ರಾಯಚೂರು.
15. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಿಂಧನೂರು.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು, ಬಳ್ಳಾರಿ.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ರಾಯಚೂರು.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ,ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.